# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

ಸಹಾಯಕ ಕಾರ್ಯಪಾಲಕ ಅಭಿಯಂತರರ ಕಛೇರಿ
ಟಿ.ದಾಸರಹಳ್ಳಿ ಉಪ ವಿಭಾಗ, ದಾಸರಹಳ್ಳಿ ವಲಯ
ಮಾರಮ್ಮ ದೇವಸ್ಥಾನದ ಹತ್ತಿರ, ಬಾಗಲಗುಂಟೆ

ಸಂಖ್ಯೆ:ಬೃ.ಬೆಂ.ಮ.ಪಾ/ದಾ.ವ/ಸ.ಅ/ವಾ.30/ಪಿಆರ್:39:2022-23

ದಿನಾಂಕ:21.05.2022

## ಬಾಗಲಗುಂಟೆ ವಾರ್ಡ್-14 ಸಮಿತಿ ಸಭೆಯ ನಡವಳಿಗಳು

**ಮಾನ್ಯ ಮುಖ್ಯ ಆಯುಕ್ತರು, ಬಿಬಿಎಂಪಿ ರವರ ಕಛೇರಿ ಆದೇಶ ಸಂಖ್ಯೆ:ಬಿ12(5)/ಪಿಆರ್/35/2020-21, ದಿ.16.04.2021ರ ಆದೇಶದಂತೆ ದಿ.21.05.2022 ರಂದು ನಡೆದ ಬಾಗಲಗುಂಟೆ ವಾರ್ಡ್ ನಂ.14ರ ವಾರ್ಡ್ ಸಮಿತಿ ಸಭೆಯ ನಡವಳಿಗಳು:-**

**ಸಭೆಗೆ ಹಾಜರಾಗಿದ್ದವರ ವಿವರಗಳು:-**

| ಕ್ರ.ಸಂ | ಹೆಸರು ಶ್ರೀಮತಿ/ಶ್ರೀ | ಪದನಾಮ |
|---|---|---|
| 1 | ಶ್ರೀ.ಕೆ.ಮರುಳಸಿದ್ದಪ್ಪ | ಕಾರ್ಯಪಾಲಕ ಅಭಿಯಂತರರು, ವಾರ್ಡ್ ಸಮಿತಿ ಅಧ್ಯಕ್ಷರು ಮತ್ತು ನೋಡೆಲ್ ಅಧಿಕಾರಿಗಳು |
| 2 | ಶ್ರೀ.ವೆಂಕಟೇಶಪ್ಪ | ಸದಸ್ಯ ಕಾರ್ಯದರ್ಶಿ ಹಾಗೂ ಸಹಾಯಕ ಅಭಿಯಂತರರು, ವಾರ್ಡ್ ನಂ.14, ಬಾಗಲಗುಂಟೆ |
| 3 | ಶ್ರೀ.ಮಂಜುನಾಥ್ ಡಿ | ವಾಟರ್ ಇನ್ಸ್‌ಪೆಕ್ಟರ್, ಬಿ.ಡಬ್ಲ್ಯೂ.ಎಸ್.ಎಸ್.ಬಿ ಬಾಗಲಗುಂಟೆ |
| 4 | ಶ್ರೀ. ತನಯ್ ಕುಮಾರ್ ಎ | ಸಹಾಯಕ ಅಭಿಯಂತರರು |
| 5 | ಶ್ರೀ.ಶೋಭ ಜೆ | ಮೆಡಿಕಲ್ ಆಫಿಸರ್, ಪ್ರಾಥಮಿಕ ಆರೋಗ್ಯ ಕೇಂದ್ರ, ಬಾಗಲಗುಂಟೆ |
| 6 | ಶ್ರೀ.ಡಾ॥ಚಂದನ | ಮೆಡಿಕಲ್ ಆಫೀಸರ್, ಹಿರಿಯ ಆರೋಗ್ಯ ಪರಿವೀಕ್ಷಕರು |
| 7 | ಶ್ರೀ.ಆದರ್ಶ್ ಡಿ.ಕೆ | ಸಹಾಯಕ ಅಭಿಯಂತರರು, ಬಿ.ಡಬ್ಲ್ಯೂ.ಎಸ್.ಎಸ್.ಬಿ ಎನ್-4 ಸಬ್ ಡಿವಿಷನ್ |
| 8 | ಶ್ರೀ.ಹೆಚ್.ರಮೇಶ್ | ಕಿರಿಯ ಆರೋಗ್ಯ ಪರಿವೀಕ್ಷಕರು, ಬಾಗಲಗುಂಟೆ ವಾರ್ಡ್ 14 |
| 9 | ಶ್ರೀ.ಬಿ.ಟಿ.ಲಕ್ಷ್ಮಿವೆಂಕಟೇಶ್ | ಕದಂಬ ನಾಗರೀಕ ಹಿತ ರಕ್ಷಣಾ ಸಮಿತಿ, ಮುನಿಕೊಂಡಪ್ಪ ಬಡಾವಣೆ |
| 10 | ಶ್ರೀ.ಸಿ.ಬಿ.ಕೃಷ್ಣಪ್ಪ | ಅರಣ್ಯ ಇಲಾಖೆ, ಬಿಬಿಎಂಪಿ |
| 11 | ಶ್ರೀ.ಮಹಾದೇವಯ್ಯ | ತೋಟಗಾರಿಕೆ ಇಲಾಖೆ, ಬಿಬಿಎಂಪಿ |
| 12 | ಶ್ರೀ.ರವಿಕುಮಾರ್ ಆರ್ | ಬಿ.ಡಬ್ಲ್ಯೂ.ಎಸ್.ಎಸ್.ಬಿ ಇಲಾಖೆ |
| 13 | ಶ್ರೀ.ಶಶಿಕಿರಣ್ | ಸಹಾಯಕ ಅಭಿಯಂತರರು, ಬೆಸ್ಕಾಂ |
| 14 | ಶ್ರೀ.ವೆಂಕಟರಮಣ ಹೊಳ್ಳ | ರಾಯಲ್ ಎನ್‌ಕ್ಲೇವ್, ವಾರ್ಡ್ ಸಮಿತಿ ಸದಸ್ಯರು |
| 15 | ಶ್ರೀ.ಹನುಮಂತರಾಯಪ್ಪ | ನಾಗರೀಕ ಹಿತ ರಕ್ಷಣಾ ಸಮಿತಿ , ಹಾವನೂರು ಬಡಾವಣೆ |

ನೋಡಲ್ ಅಧಿಕಾರಿಗಳು ಸಭೆಯಲ್ಲಿ ಹಾಜರಿದ್ದ ವಾರ್ಡ್ ಸಭೆಯ ಸದಸ್ಯರು, ಹಾಜರಿದ್ದ ಅಧಿಕಾರಿಗಳನ್ನು ಹಾಗೂ ವಿವಿಧ ಬಡಾವಣೆಯ ಕ್ಷೇಮಾಭಿವೃದ್ಧಿ ಸಂಘದ ಪದಾಧಿಕಾರಿಗಳನ್ನು ಸ್ವಾಗತಿಸಿ ಸಭೆಯನ್ನು ಪ್ರಾರಂಭಿಸಿದರು.

ಈ ಹಿಂದಿನ ಸಭೆಯ ಸಭಾ ನಡವಳಿಯನ್ನು ಚರ್ಚಿಸಿ, ಬಾಕಿ ಇರುವ ಕುಂದು ಕೊರತೆಗಳನ್ನು ಆದ್ಯತೆಯ ಮೇಲೆ ಪೂರೈಸುವಂತೆ ಸಂಬಂಧಪಟ್ಟ ಅಧಿಕಾರಿಗಳಿಗೆ ನೋಡಲ್ ಅಧಿಕಾರಿಗಳು ಸೂಚಿಸಿದರು.

Scanned with CamScanner

- **ಬಿ.ಡಬ್ಲ್ಯೂ.ಎಸ್.ಎಸ್.ಬಿ ಗೆ ಸಂಬಂಧಪಟ್ಟ ವಿಷಯದ ಬಗ್ಗೆ.**

➢ ಬಾಗಲಗುಂಟೆ ವಾರ್ಡ್ ವ್ಯಾಪ್ತಿಯಲ್ಲಿನ ಹಲವು ಬಡಾವಣೆಗಳಲ್ಲಿ ನೀರು ಸರಬರಾಜು ವ್ಯತ್ಯಯವಾಗಿರುವುದರಿಂದ ನೀರಿನ ಅಭಾವ ಉಂಟಾಗಿರುತ್ತದೆ. ಆದುದರಿಂದ ಹೆಚ್ಚಿನ ನೀರು ಸರಬರಾಜು ವ್ಯವಸ್ಥೆಯನ್ನು ಮಾಡಲು ಸಹಾಯಕ ಅಭಿಯಂತರರನ್ನು ವಾರ್ಡ್ ಕಮಿಟಿ ಸದಸ್ಯರು ಕೋರಿದರು.

➢ ಕುವೆಂಪುನಗರ ಹಾಗೂ ಮುನಿಕೊಂಡಪ್ಪ ಬಡಾವಣೆಯಲ್ಲಿ ಸ್ಯಾನಿಟರಿ ಬ್ಲಾಕ್ ಆಗಿದ್ದು, ಕೂಡಲೇ ಅದನ್ನು ಸರಿಪಡಿಸಿಕೊಡಬೇಕಾಗಿ ಬಿ.ಡಬ್ಲ್ಯೂ.ಎಸ್.ಎಸ್.ಬಿ ಅಭಿಯಂತರರನ್ನು ವಾರ್ಡ್ ಸಮಿತಿ ಸದಸ್ಯರು ಕೋರಿದರು.

➢ ವಾರ್ಡ್ ವ್ಯಾಪ್ತಿಯಲ್ಲಿ ನೀರು ಸರಬರಾಜುದಾರರು ಸಮರ್ಪಕವಾಗಿ ಕಾರ್ಯ ನಿರ್ವಹಿಸದಿರುವ ಬಗ್ಗೆ ವಾರ್ಡ್ ಸಮಿತಿ ಸದಸ್ಯರು ಸೂಚಿಸಿದರು.

➢ ಒಳಚರಂಡಿ ವ್ಯವಸ್ಥೆಗಾಗಿ ಪೈಪ್‌ಲೈನ್ ಅಳವಡಿಸಲು ರಸ್ತೆಯನ್ನು ಬಿ.ಡಬ್ಲ್ಯೂ.ಎಸ್.ಎಸ್.ಬಿ ವತಿಯಿಂದ ಕತ್ತರಿಸಿರುವುದು ಕಂಡುಬಂದಿರುತ್ತದೆ. ಸದರಿ ವಿಷಯಗಳ ದುರಸ್ಥಿ ಕಾರ್ಯವನ್ನು ತುರ್ತಾಗಿ ನಿರ್ವಹಿಸಲು ಬಿ.ಡಬ್ಲ್ಯೂ.ಎಸ್.ಎಸ್.ಬಿ ಇಲಾಖೆಯ ಸಹಾಯಕ ಅಭಿಯಂತರರಾದ ಆದರ್ಶ್ ಕೆ ಮತ್ತು ಡಿ.ಮಂಜುನಾಥ್ ವಾಟರ್ ಇನ್ಸ್‌ಪೆಕ್ಟರ್ ರವರಿಗೆ ಸೂಚಿಸಲಾಯಿತು.

ಕ್ರಮ: ಬಿ.ಡಬ್ಲ್ಯೂ.ಎಸ್.ಎಸ್.ಬಿ ಇಲಾಖೆ

- **ಬೆಸ್ಕಾಂಗೆ ಸಂಬಂಧಪಟ್ಟ ವಿಷಯದ ಬಗ್ಗೆ.**

➢ ಟ್ರಾನ್ಸ್‌ಫಾರ್ಮರ್‌ಗಳ ಎತ್ತರವನ್ನು ಹೆಚ್ಚಿಸುವ ಕೆಲಸವು ಸಂಪೂರ್ಣವಾಗಿ ಮುಗಿದಿದ್ದು, ಮತ್ತು 11 ಕೆ.ವಿ ಕೇಬಲ್‌ಗಳನ್ನು ಯು.ಜಿ ಕೇಬಲ್‌ಗಳನ್ನಾಗಿ ಮಾರ್ಪಾಡಿಸುವ ಕೆಲಸವು ಪ್ರಗತಿಯಲ್ಲಿದೆ ಎಂದು ಬೆಸ್ಕಾಂ ಅಭಿಯಂತರರು ವಾರ್ಡ್ ಸಮಿತಿ ಸಭೆಯಲ್ಲಿ ತಿಳಿಸಿದರು.

➢ ಸಿಡೇದಹಳ್ಳಿ ಮುಖ್ಯರಸ್ತೆಯಲ್ಲಿ ಚೇಂಜ್ ಓವರ್ ಬಾಕ್ಸ್‌ನ್ನು ಬಿಟ್ಟು ಹೋಗಿದ್ದು, ಇದರಿಂದ ವಾಹನ ಸವಾರರಿಗೆ ತೊಂದರೆಯಾಗುತ್ತಿದ್ದು, ಕೂಡಲೇ ತೆರವುಗೊಳಿಸಲು ವಾರ್ಡ್ ಸಮಿತಿ ಸದಸ್ಯರು ಕೋರಿದರು.

➢ ರಾಯಲ್ ಎನ್‌ಕ್ಲೇವ್‌ನಲ್ಲಿ ಪ್ಯಾನೆಲ್‌ಬೋರ್ಡ್ ಕೆಲಸ ನಿರ್ವಹಿಸಿದ್ದು, ಕೆಲಸ ನಿರ್ವಹಿಸದ ನಂತರ ಉಳಿದಿರುವ ತ್ಯಾಜ್ಯವನ್ನು ತೆರವುಗೊಳಿಸಲು ಸೂಚಿಸಲಾಯಿತು.

➢ ಬೆಸ್ಕಾಂ ಇಲಾಖೆಯ ಕಾಮಗಾರಿಯಿಂದಾಗಿ ಬಿ.ಡಬ್ಲ್ಯೂ.ಎಸ್.ಎಸ್.ಬಿ ಇಲಾಖೆಯವರು ಅಳವಡಿಸಿರುವ ಸ್ಯಾನಿಟರಿ ಪೈಪ್‌ಗಳು ಶಿಥಿಲಗೊಂಡಿರುತ್ತದೆ ಮತ್ತು ಬೆಸ್ಕಾಂ ಕೇಬಲ್‌ಗಳು ಸ್ಯಾನಿಟರಿ ಪೈಪ್‌ಗಳಲ್ಲಿ ಸೇರಿಕೊಂಡಿರುತ್ತದೆ ಕೂಡಲೇ ಈ ವಿಷಯದ ಬಗ್ಗೆ ಗಮನಹರಿಸಿ, ಸಹಕರಿಸಬೇಕಾಗಿ ಬಿ.ಡಬ್ಲ್ಯೂ.ಎಸ್.ಎಸ್.ಬಿ ಇಲಾಖೆಯ ಅಭಿಯಂತರರು ಬೆಸ್ಕಾಂ ಅಭಿಯಂತರರಿಗೆ ಕೋರಿದರು.

➢ ಬೆಸ್ಕಾಂ ಇಲಾಖೆಯಿಂದ ವಾರ್ಡ್ ವ್ಯಾಪ್ತಿಯಲ್ಲಿನ ರಸ್ತೆಗಳಲ್ಲಿ ಅಗೆದಿರುವ ಗುಂಡಿಗಳನ್ನು ತುರ್ತಾಗಿ ದುರಸ್ಥಿಪಡಿಸಲು ಬೆಸ್ಕಾಂ ಸಹಾಯಕ ಅಭಿಯಂತರರನ್ನು ಕೋರಿದರು.

ಸದರಿ ವಿಷಯಗಳ ಬಗ್ಗೆ ತುರ್ತು ಕ್ರಮವಹಿಸಲು ಸಂಬಂಧಪಟ್ಟ ಬೆಸ್ಕಾಂ ಇಲಾಖೆಯವರಿಗೆ ಸೂಚಿಸಲಾಯಿತು.

ಕ್ರಮ:ಬೆಸ್ಕಾಂ ಇಲಾಖೆ, ವಾ-14/ಸದಸ್ಯ ಕಾರ್ಯದರ್ಶಿ

Scanned with CamScanner

- **ಘನತ್ಯಾಜ್ಯ ನಿರ್ವಹಣೆ ಬಗ್ಗೆ.**

ಕಿರಿಯ ಆರೋಗ್ಯ ಪರಿವೀಕ್ಷಕರು ಮಾತನಾಡಿ ವಾರ್ಡ್ ವ್ಯಾಪ್ತಿಯಲ್ಲಿ ಪರಿಣಾಮಕಾರಿಯಾಗಿ ಘನತ್ಯಾಜ್ಯ ವಿಲೇವಾರಿ ಮಾಡಲು ಕ್ರಮವಹಿಸುತ್ತಿರುವುದಾಗಿ ಸಭೆಗೆ ತಿಳಿಸಿದರು. 35 ಆಟೋಗಳು 35 ಬ್ಲಾಕ್‌ಗಳಲ್ಲಿ ಸಮರ್ಪಕವಾಗಿಕಾರ್ಯ ನಿರ್ವಹಿಸುತ್ತಿರುವುದಾಗಿ ತಿಳಿಸಿದರು ಹಾಗೂ ಸಂಬಂಧಿಸಿದ ಗುತ್ತಿಗೆದಾರರು ಹಾಗೂ ಮೇಲ್ವಿಚಾರಕರುಗಳು ಹಾಜರಿದ್ದು, ಘನತ್ಯಾಜ್ಯವನ್ನು ಸಮರ್ಪಕವಾಗಿ ವಿಲೇವಾರಿ ಮಾಡಲು ಸೂಚಿಸಲಾಯಿತು.

ಕ್ರಮ:ಸ.ಕಾ.ನಿ.ಅ (ಘ.ತ್ಯಾ.ನಿ)/ಹಿರಿಯ/ಕಿರಿಯ ಆರೋಗ್ಯ ನಿರೀಕ್ಷಕರು

- **ಕೋವಿಡ್-19 ಸಾಂಕ್ರಾಮಿಕ ರೋಗದ ಬಗ್ಗೆ.**

ವಾರ್ಡ್ ವ್ಯಾಪ್ತಿಯಲ್ಲಿ ಕೋವಿಡ್-19 ಸಂಬಂಧಿಸಿದಂತೆ, ಆರೋಗ್ಯ ಪರಿವೀಕ್ಷಕರು ಈ ಕೆಳಕಂಡಂತೆ ಮಾಹಿತಿ ಒದಗಿಸಿದರು.

| | |
|---|---|
| ಒಟ್ಟು ಪ್ರಕರಣಗಳು | 9099 |
| ಬಿಡುಗಡೆಯಾದ ಪ್ರಕರಣಗಳು | 8938 |
| ಸಕ್ರಿಯ ಪ್ರಕರಣಗಳು | 0 |
| ಮರಣ | 161 |

ಇರುತ್ತದೆಂದು ಹಾಗೂ ಸಧ್ಯದ ಪರಿಸ್ಥಿತಿಯಲ್ಲಿ 12 ರಿಂದ 14 ವರ್ಷದ ವಯಸ್ಸಿನ ಲಸಿಕೆ ಹಾಕುವ ಕಾರ್ಯಕ್ರಮ ನಡೆಯುತ್ತಿದ್ದು, ಶೇ.67% ಲಸಿಕೆಯನ್ನು ನೀಡಲಾಗಿದೆ ಮತ್ತು 15-18 ವಯಸ್ಸಿನವರಿಗೆ 90% ಹಾಗೂ ಬೂಸ್ಟರ್ ಡೋಸ್ 90% (60 ವಯಸ್ಸಿನ ಮೇಲ್ಪಟ್ಟವರಿಗೆ) ನೀಡಲಾಗಿದೆ ಎಂದು ಡಾ||ಚಂದನ ರವರು ತಿಳಿಸಿದರು. ಹಾಗೂ ಪಾಲಕರು ಮಕ್ಕಳನ್ನು ಆಸ್ಪತ್ರೆಯ ಹತ್ತಿರ ಕರೆ ತಂದು ಲಸಿಕೆ ಹಾಕಿಸಲು ವಾರ್ಡ್‌ನ ನಿವಾಸಿಗಳಿಗೆ ತಿಳಿಸಲು ವಾರ್ಡ್ ಸಮಿತಿ ಸದಸ್ಯರಿಗೆ ಕೋರಲಾಯಿತು.

ಕ್ರಮ: ಕೋವಿಡ್ ಆರೋಗ್ಯ ವೈಧ್ಯಾಧಿಕಾರಿಗಳು/ ಹಿರಿಯ ಆರೋಗ್ಯ ಪರಿವೀಕ್ಷಕರು

- **ಇತರೆ ವಿಷಯಗಳ ಬಗ್ಗೆ.**

➢ ವಾರ್ಡ್ ವ್ಯಾಪ್ತಿಯಲ್ಲಿನ ಹಲವಾರು ಬಡಾವಣೆಗಳ ರಸ್ತೆಗಳಲ್ಲಿ ಡಾಂಬರೀಕರಣ ಕಾಮಗಾರಿಯು ಪ್ರಗತಿಯಲ್ಲಿರುವುದಾಗಿ ವಾರ್ಡ್ ಅಭಿಯಂತರರು ತಿಳಿಸಿದರು.

➢ ಕರೆಕಲ್ಲು ವ್ಯಾಪ್ತಿಯಲ್ಲಿನ ಅಶ್ವತ್ಥಕಟ್ಟೆಯಲ್ಲಿನ ಮರದ ಕೊಂಬೆ ಒಣಗಿ, ಬೀಳುವ ಸ್ಥಿತಿಯಲ್ಲಿದ್ದು, ಕೂಡಲೇ ತೆರವುಗೊಳಿಸಬೇಕಾಗಿ ವಲಯ ಅರಣ್ಯಾಧಿಕಾರಿಗಳಿಗೆ ಸೂಚಿಸಲಾಯಿತು.

➢ ವಿದ್ಯುತ್ ದೀಪಗಳ ನಿರ್ವಹಣೆಗಾಗಿ ಮರದ ಕೊಂಬೆಗಳನ್ನು ಕತ್ತರಿಸಲು ಅರಣ್ಯ ಇಲಾಖೆಯವರನ್ನು ವಾರ್ಡ್ ಕಮಿಟಿ ಸದಸ್ಯರು ಸಭೆಯಲ್ಲಿ ಕೋರಿದರು.

➢ ಗಣೇಶ ದೇವಸ್ಥಾನದ ಹತ್ತಿರದ ಪಾರ್ಕ್‌ನ್ನು ಕಳೆದ ಕೆಲವು ದಿನಗಳಿಂದ ಗೇಟನ್ನು ಮುಚ್ಚಿದ್ದು, ಇದರಿಂದ ವಾಯುವಿಹಾರಿಗಳಿಗೆ ಹಾಗೂ ಸಾರ್ವಜನಿಕರಿಗೆ ತೊಂದರೆಯಾಗುತ್ತಿದ್ದು, ಕೂಡಲೇ ಪಾರ್ಕ್‌ನ್ನು ತೆರೆದು ಅನುಕೂಲಮಾಡಿಕೊಡಬೇಕಾಗಿ ವಾರ್ಡ್ ಕಮಿಟಿ ಸದಸ್ಯರು ಸಭೆಯಲ್ಲಿ ಕೋರಿದರು.

Scanned with CamScanner

- ಬೆಸ್ಕಾಂ ಇಲಾಖೆಯವರು ಶೂಟಿಂಗ್ ಬಂಗಲೆ ರಸ್ತೆಯಲ್ಲಿ ಹೊಸದಾಗಿ ವಿದ್ಯುತ್ ಸಂಪರ್ಕ ಲೈನ್ ಹಾಕಿದ್ದು, ಇಲ್ಲಿ ವಿದ್ಯುತ್ ಕಂಬವನ್ನು ಅಳವಡಿಸಿ ಬಲ್ಪ್‌ಗಳನ್ನು ಹಾಕಿ ಸಾರ್ವಜನಿಕರ ಅನುಕೂಲಮಾಡಿಕೊಡಬೇಕೆಂದು ವಾರ್ಡ್ ಸಮಿತಿ ಸದಸ್ಯರುಗಳು ಕೋರಿದರು. ಬೆಸ್ಕಾಂ ಇಲಾಖೆಯ ಸಂಬಂಧಪಟ್ಟವರಿಗೆ ತುರ್ತು ಕ್ರಮವಹಿಸುವ ಬಗ್ಗೆ ತಿಳಿಸಲು ವಾರ್ಡ್ ಅಭಿಯಂತರರಿಗೆ ಸೂಚಿಸಿದರು.

ಕ್ರಮ:ಸ.ಅ ವಾ.14/ ಸ.ಕಾ.ನಿ.ಅ (ದಾಸರಹಳ್ಳಿ ಉಪ-ವಿಭಾಗ)
ಸಹಾಯಕ ಕಾರ್ಯಪಾಲಕ ಅಭಿಯಂತರರು, ಬೆಸ್ಕಾಂ

ಸಹಾಯಕ ಅಭಿಯಂತರರು
ಹಾಗೂ ಸದಸ್ಯ ಕಾರ್ಯದರ್ಶಿ ವಾರ್ಡ್ ಸಮಿತಿ

ನೋಡಲ್ ಅಧಿಕಾರಿ ಹಾಗೂ
ವಾರ್ಡ್ ಸಮಿತಿ ಅಧ್ಯಕ್ಷರು, ವಾ.ನಂ.14, ಬಾಗಲಗುಂಟೆ
ಮತ್ತು ಕಾರ್ಯಪಾಲಕ ಅಭಿಯಂತರರು
ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

**ಅಧಿಕಾರಿಗಳ ಮಾಹಿತಿಗಾಗಿ:-**

1) ಸನ್ಮಾನ್ಯ ಶ್ರೀ.ಆರ್.ಮಂಜುನಾಥ್ ರವರು, ಮಾನ್ಯ ಶಾಸಕರು, ದಾಸರಹಳ್ಳಿ ವಿಧಾನ ಸಭಾ ಕ್ಷೇತ್ರ ರವರ ಮಾಹಿತಿಗಾಗಿ ಸಲ್ಲಿಸಲಾಗಿದೆ.
2) ಮಾನ್ಯ ವಲಯ ಆಯುಕ್ತರು, ದಾಸರಹಳ್ಳಿ ವಲಯ, ಬಿ.ಬಿ.ಎಂ.ಪಿ, ಬೆಂಗಳೂರು ರವರ ಅವಗಾಹನೆಗಾಗಿ ಮಂಡಿಸಿದೆ.
3) ಮಾನ್ಯ ಜಂಟಿ ಆಯುಕ್ತರು (ದಾಸರಹಳ್ಳಿ) ವಲಯ ರವರ ಅವಗಾಹನೆಗಾಗಿ ಮಂಡಿಸಿದೆ.
4) ಮುಖ್ಯ ಅಭಿಯಂತರರು, (ದಾಸರಹಳ್ಳಿ) ವಲಯರವರ ಅವಗಾಹನೆಗಾಗಿ ಮಂಡಿಸಿದೆ.
5) ಆರೋಗ್ಯ ವೈಧ್ಯಾಧಿಕಾರಿಗಳು (ದಾಸರಹಳ್ಳಿ) ವಲಯ ರವರ ಮಾಹಿತಿಗಾಗಿ ಹಾಗೂ ಸೂಕ್ತ ಕ್ರಮಕ್ಕಾಗಿ.
6) ವಲಯ ಅರಣ್ಯಾಧಿಕಾರಿಗಳು, ದಾಸರಹಳ್ಳಿ ವಲಯ ರವರ ಮಾಹಿತಿಗಾಗಿ ಹಾಗೂ ಸೂಕ್ತ ಕ್ರಮಕ್ಕಾಗಿ.
7) ಕಾರ್ಯಪಾಲಕ ಅಭಿಯಂತರರು, ದಾ.ವಿ ರವರ ಮಾಹಿತಿಗಾಗಿ ಕಳುಹಿಸಿದೆ.
8) ಸಹಾಯಕ ಕಾರ್ಯಪಾಲಕ ಅಭಿಯಂತರರು (ಟಿ.ದಾ.ಉ.ವಿ) ರವರ ಮಾಹಿತಿಗಾಗಿ ಕಳುಹಿಸಿದೆ
9) ಸಹಾಯಕ ಕಂದಾಯ ಅಧಿಕಾರಿ (ದಾ.ಉ.ವಿ) ಬಿಬಿಎಂಪಿ, ಬೆಂಗಳೂರು ರವರ ಮಾಹಿತಿಗಾಗಿ ಕಳುಹಿಸಿದೆ.
10) ಸಹಾಯಕ ಕಾರ್ಯಪಾಲಕ ಅಭಿಯಂತರರು, ಬಿ.ಡಬ್ಲ್ಯೂ.ಎಸ್.ಎಸ್.ಬಿ ರವರಿಗೆ ಸಲ್ಲಿಸಿದೆ
11) ಸಹಾಯಕ ಕಾರ್ಯಪಾಲಕ ಅಭಿಯಂತರರು, ಬೆಸ್ಕಾಂ ರವರಿಗೆ ಕಳುಹಿಸಿದೆ.
12) ಹಿರಿಯ / ಕಿರಿಯ ಆರೋಗ್ಯ ಪರಿವೀಕ್ಷಕರು ವಾರ್ಡ್ ನಂ. 14 ರವರಿಗೆ ಅಗತ್ಯ ಕ್ರಮಕ್ಕಾಗಿ ಕಳುಹಿಸಿದೆ.
13) ಕಲ್ಯಾಣಾಧಿಕಾರಿಗಳು (ದಾವ) ಬಿಬಿಎಂಪಿ ರವರಿಗೆ ಅಗತ್ಯ ಕ್ರಮಕ್ಕಾಗಿ ಕಳುಹಿಸಿದೆ.
14) ಕಛೇರಿ ಪ್ರತಿ.

Scanned with CamScanner